ಓ.ಎಸ್ಃ 187/2025

ಪಿ.ಡಬ್ಲ್ಯೂಃ 02

**<u>ದಿನಾಂಕಃ 03.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಲಾಯಿತು</u>**

**<u>ಮುಖ್ಯವಿಚಾರಣೆ ವಾದಿಯ ಪರ ಶ್ರೀ. ಎ.ಎಸ್.ಕೆ. ವಕೀಲರಿಂದಃ-</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತವೆ. ಸದರಿ ಸಂಗತಿಗಳನ್ನು ನಾನೇ ಹೇಳಿ ಬರೆಸಿರುತ್ತೇನೆ ಅದರಲ್ಲಿ ಬರೆದಿರುವ ಸಂಗತಿಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

**<u>ಪಾಟೀ ಸವಾಲು ಪ್ರತಿವಾದಿಗಳ ಪರ ಮಾನ್ಯ ಎ.ಜಿ.ಪಿ. ರವರಿಂದಃ-</u>**

2. ಭಾಷಾಸಾಬ ನನ್ನ ತಮ್ಮನಾಗಬೇಕು. ಈಗ 20 ವರ್ಷಗಳ ಹಿಂದೆ ನನ್ನ ಹಾಗೂ ನನ್ನ ತಮ್ಮನ ನಡುವೆ ವಾಟ್ನಿ ಆಗಿರುತ್ತದೆ. ವಾಟ್ನಿ ಅರ್ಜಿ ಸಲ್ಲಿಸುವ ಸಮಯದಲ್ಲಿ ಕಂದಾಯ ಅಧಿಕಾರಿಗೆ ನಾನು ವಾದಿಯ ಹೆಸರನ್ನು ಹುಸೇನಸಾಬ ಎಂದು ನಮೂದಿಸಿರುತ್ತೇನೆ ಎಂದರೆ ಸರಿ, ಸಾಕ್ಷಿ ಮುಂದುವರೆದು ತಪ್ಪಾಗಿ ನಮೂದಿಸಿರುತ್ತೇನೆ ಎಂದು ನುಡಿಯುತ್ತಾರೆ. ವಾಟ್ನಿಯಾಗಿ ಸುಮಾರು 25 ವರ್ಷಗಳು ಆಗಿರುತ್ತದೆ ಎಂದರೆ ಸರಿ. ಸದರಿ ವಾಟ್ನಿ ಆದಂತೆ ಪಹಣಿ ಪತ್ರಿಕೆಯಲ್ಲಿ ವಾದಿಯ ಹೆಸರು ಹುಸೇನಸಾಬ ಎಂದು ನಮೂದಿಸಲಾಗಿರುತ್ತದೆ ಎಂದರೆ ಸರಿ. ಸದರಿ ವಾಟ್ನಿ ಪತ್ರದಲ್ಲಿ ನಮೂದು ಆಗಿದ್ದನ್ನು ತಿದ್ದುಪಡಿ ಮಾಡಿಕೊಂಡಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ ಅಮಿತ್ ಘಟ್ಟಿ)**

**ದಿವಾಣಿ ನ್ಯಾಯಾಧೀಶರು ಮತ್ತು**

**ನ್ಯಾಯಿಕ ದಂಡಾಧಿಕಾರಿಗಳು**

**ಬಸವನ ಬಾಗೇವಾಡಿ.**